**2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 38**

# ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024

## ಪ್ರಕರಣಗಳ ಪಟ್ಟಿ

**ಪ್ರಕರಣಗಳು**


1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ

2. ಪರಿಭಾಷೆಗಳು

3. ಪ್ರಾಧಿಕಾರದ ರಚನೆ

4. ಆಯುಕ್ತರ ನೇಮಕಾತಿ

5.ಆಯುಕ್ತರ ಕರ್ತವ್ಯಗಳು

6. ಯೋಜನಾಧಿಕಾರಿ ಮತ್ತು ಅಭಿಯಂತರರ ನೇಮಕಾತಿ

7. ಲೆಕ್ಕಾಧಿಕಾರಿ ಮುಂತಾದವರ ನೇಮಕಾತಿ

8. ಪ್ರಾಧಿಕಾರದ ಅಧಿಕಾರಗಳು

9. ಪ್ರಾಧಿಕಾರದ ಸಭೆಗಳು

10. ಕೆಲವು ನಿರ್ಣಯಗಳನ್ನು ಕೈಕೊಳ್ಳಲು ಅಧ್ಯಕ್ಷರ ವಿಶೇಷಾಧಿಕಾರ

11. ಪ್ರತ್ಯಾಯೋಜನೆ ಅಧಿಕಾರ

12 ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳತಕ್ಕದ್ದಲ್ಲ

13. ಅಭಿವೃದ್ಧಿ ಯೋಜನೆ ಸಿದ್ಧತೆ, ಅದರ ಅನುಮೋದನೆ ಮತ್ತು ಜಾರಿ

14. ಶುಲ್ಕ ವಿಧಿಸುವುದು

15. ಪ್ರಾಧಿಕಾರ ನಿಧಿ

16. ಆಯವ್ಯಯ

17. ವಾರ್ಷಿಕ ವರದಿ

18. ಪ್ರಾಧಿಕಾರಕ್ಕೆ ಧನ ಸಹಾಯ ಮತ್ತು ಸಾಲಗಳು

19. ಪ್ರಾಧಿಕಾರವು ಸಾಲ ಪಡೆಯಲು ಅಧಿಕಾರ

20. ಲೆಕ್ಕ ಪತ್ರಗಳು ಮತ್ತು ಲೆಕ್ಕ ಪರಿಶೋಧನೆ

21. ಪ್ರಾಧಿಕಾರದಿಂದ ನಿರ್ದೇಶನಗಳು

22. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗಾಗಿ ದಂಡನೆ

23. ಕಂಪೆನಿಗಳಿಂದ ಅಪರಾಧಗಳು

24. ಅಭಿಯೋಜನೆಗಾಗಿ ಅನುಮತಿ

25. ಪ್ರಾಧಿಕಾರವು ತನ್ನ ಅಥವಾ ಅದರ ವಿರುದ್ಧದ ಕ್ಲೇಮುಗಳನ್ನು ಸಂಧಾನ ಮಾಡಿಕೊಳ್ಳುವುದು

26. ವಸೂಲ್ಮಾಡಲಾದ ಜುಲ್ಮಾನೆಗಳನ್ನು ನಿಧಿಗೆ ಜಮೆ ಮಾಡುವುದು

27. ಸದಸ್ಯರು ಮತ್ತು ಅಧಿಕಾರಿಗಳು ಲೋಕ ನೌಕರರಾಗಿರುವುದು

28. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ

29. ರಾಜ್ಯ ಸರ್ಕಾರದಿಂದ ನಿಯಂತ್ರಣ, ಇತ್ಯಾದಿ

30. ನಿಯಮಗಳ ರಚನಾಧಿಕಾರ

31. ವಿನಿಯಮಗಳ ರಚನಾಧಿಕಾರ

32. ತೊಂದರೆಗಳ ನಿವಾರಣಾ ಅಧಿಕಾರ

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**I**

**2025ರ ಅಧಿನಿಯಮ ಸಂಖ್ಯೆ: 38** (ಎ) ಗದಗ-ಬೆಟಗೇರಿ ಮತ್ತು ಅದರ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ಅಂತರಾಷ್ಟ್ರೀಯ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಕೇಂದ್ರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ;

(ಬಿ) ಇಂಜಿನಿಯರಿಂಗ್, ಆಟೋಮೋಬೈಲ್, ಮರಮುಟ್ಟು ಮತ್ತು ಕರಕುಶಲ ಐಟಿ ಮತ್ತು ಬಿಟಿಗಳಂತಹ ಉದ್ಯಮ ವಲಯಗಳನ್ನು ಪೋಷಿಸುವ ಅಂತರಾಷ್ಟ್ರೀಯ ವಸ್ತು ಪ್ರದರ್ಶನ ಮತ್ತು ಸಂವಾದಾತ್ಮಕ ಕೇಂದ್ರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ ಮತ್ತು ಆ ಕ್ಷೇತ್ರವನ್ನು ಮಾಹಿತಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವುದಕ್ಕಾಗಿ;

(ಸಿ) ಕ್ರೀಡೆಗಳು, ಮನರಂಜನೆ, ಅಂತರಾಷ್ಟ್ರೀಯ ಸಮ್ಮೇಳನ ನಡೆಸುವುದು, ಸ್ಥಳೀಯ ಆಹಾರ ಮೇಳ, ವಸ್ತು ಪ್ರದರ್ಶನ ಮತ್ತು ಮಾರುಕಟ್ಟೆಯನ್ನು ಪ್ರೋತ್ಸಾಹಿಸುವುದಕ್ಕಾಗಿ;

(ಡಿ) ಮೇಲಿನ ಧ್ಯೇಯೋದ್ದೇಶಗಳಿಗೆ ಅನುಕೂಲವಾಗುವ ಕ್ಷೇತ್ರಗಳ ಸುಸ್ಥಿರ ಅಭಿವೃದ್ಧಿಗಾಗಿ; ಮತ್ತು ಇದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ;

-ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ರಚನೆಗಾಗಿ ಉಪಬಂಧ ಕಲ್ಪಿಸುವ ಅವಶ್ಯಕವೆಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

[2024ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 19, ಕಡತ ಸಂಖ್ಯೆ:ಸಂವ್ಯಶಾಇ 32 ಶಾಸನ 2023]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:275, ದಿನಾಂಕ:13.05.2025 ರಲ್ಲಿ ಪ್ರಕಟಗೊಂಡಿದೆ]

**II**

**2025ರ ತಿದ್ದುಪಡಿ ಅಧಿನಿಯಮ ಸಂಖ್ಯೆ: 66** ಸರ್ಕಾರದ ಆದೇಶ ಸಂಖ್ಯೆ: ಯುಡಿಡಿ 18 ಟಿಎಂಡಿ 2023, ದಿನಾಂಕ:03-05-2025ನ್ನು ಸಚಿವ ಸಂಪುಟದ ಅನುಮೋದನೆಯೊಂದಿಗೆ ಈ ಮುಂದಿನವುಗಳಿಗಾಗಿ ಹೊರಡಿಸಲಾಗಿದೆ,-

(i) ಗದಗ-ಬೆಟಗೇರಿ, ನಗರ ಸಭೆ ಮಿತಿಯೊಳಗಿನ ಸರ್ವೆ ನಂ.3782, 3783, 3786, 3796 ಮತ್ತು 3797ರಲ್ಲಿನ ಸಾರ್ವಜನಿಕ ರಸ್ತೆಯನ್ನೊಳಗೊಂಡು ಹಳೆ ಹತ್ತಿ ಮಾರುಕಟ್ಟೆಯ, 34.32 ಎಕರೆ ಅಳತೆಯ ಭೂಮಿಯನ್ನು ಕರ್ನಾಟಕ ಮುನಿಸಿಪಾಲಿಟಿಗಳ ಅಧಿನಿಯಮ, 1964ರ 81(3)ನೇ ಪ್ರಕರಣದಡಿ ದಿನಾಂಕ:15-11-2025ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಣಯದಂತೆ ನಿರ್ಣಯ ಸಂಖ್ಯೆ:ಸಿ-524/2023ರಲ್ಲಿ ಸರ್ಕಾರಕ್ಕೆ ವರ್ಗಾಯಿಸಲು;

(ii) ಹಾಗೆ ವರ್ಗಾಯಿಸಲಾದ ಭೂಮಿಯನ್ನು ಪ್ರಾಧಿಕಾರವು ರಚನೆಯಾಗಿರುವವರೆಗೆ ಗದಗ ಜಿಲ್ಲೆಯ ಜಿಲ್ಲಾಧಿಕಾರಿಯವರ ಅಭಿರಕ್ಷೆಯಲ್ಲಿ ಇರಿಸಲು; ಮತ್ತು

(iii) “ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ” ರಚನೆಯಾದ ತರುವಾಯ ಸದರಿ ಭೂಮಿಯನ್ನು ವರ್ಗಾಯಿಸಲು,

ವಿಷಯವು ತುರ್ತು ಸ್ವರೂಪದಾದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿ ಇಲ್ಲದಿದ್ದುದರಿಂದ, ಮೇಲಿನ ಉದ್ದೇಶವನ್ನು ಸಾಧಿಸಲು ಗದಗ-ಬೆಟಗೇರಿ ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ. 03) ನ್ನು ಪ್ರಖ್ಯಾಪಿಸಲಾಗಿತ್ತು.

ಈ ವಿಧೇಯಕವು ಅಧ್ಯಾದೇಶದ ಬದಲಿ ವಿಧೇಯಕವಾಗಿದೆ.

ಆದ್ದರಿಂದ ಈ ವಿಧೇಯಕ.

[2025ರ ವಿಧಾನ ಸಭೆಯ ವಿಧೇಯಕ ಸಂಖ್ಯೆ: 52, ಕಡತ ಸಂಖ್ಯೆ:ಸಂವ್ಯಶಾಇ 32 ಶಾಸನ 2023]
[ಭಾರತ ಸಂವಿಧಾನದ 7ನೇ ಅನುಸೂಚಿಯ 2ನೇ ಪಟ್ಟಿಯ 32ನೇ ನಮೂದನೆಯಡಿ ಬರುತ್ತದೆ.]
[ಕರ್ನಾಟಕ ರಾಜ್ಯ ಪತ್ರದ ಭಾಗ IVಎ ವಿಶೇಷ ರಾಜ್ಯ ಪತ್ರಿಕೆ ಸಂಖ್ಯೆ:579, ದಿನಾಂಕ:12.09.2025ರಲ್ಲಿ ಪ್ರಕಟಗೊಂಡಿದೆ]

# 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 38

(2025 ರ ಮೇ ತಿಂಗಳ 13ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024

(2025 ರ ಮೇ ತಿಂಗಳ 13ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

(2025ರ ಅಧಿನಿಯಮ ಸಂಖ್ಯೆ:66ರ ಮೂಲಕ ತಿದ್ದುಪಡಿಯಾದಂತೆ)

(ಎ) ಗದಗ-ಬೆಟಗೇರಿ ಮತ್ತು ಅದರ ಸುತ್ತ-ಮುತ್ತಲಿನ ಪ್ರದೇಶಗಳಲ್ಲಿ ಅಂತರಾಷ್ಟ್ರೀಯ ಸಾಂಸ್ಕೃತಿಕ ಮತ್ತು ಪ್ರವಾಸೋದ್ಯಮ ಕೇಂದ್ರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ;

(ಬಿ) ಇಂಜಿನಿಯರಿಂಗ್, ಆಟೋಮೊಬೈಲ್, ಮರಮುಟ್ಟು ಮತ್ತು ಕರಕುಶಲ, ಐಟಿ ಮತ್ತು ಬಿಟಿ ಗಳಂತಹ ಉದ್ಯಮ ವಲಯಗಳನ್ನು ಪೋಷಿಸುವ ಅಂತರಾಷ್ಟ್ರೀಯ ವಸ್ತು ಪ್ರದರ್ಶನ ಮತ್ತು ಸಂವಾದಾತ್ಮಕ ಕೇಂದ್ರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ ಮತ್ತು ಆ ಕ್ಷೇತ್ರವನ್ನು ಮಾಹಿತಿ ಕೇಂದ್ರವನ್ನಾಗಿ ಅಭಿವೃದ್ಧಿಪಡಿಸುವುದಕ್ಕಾಗಿ;

(ಸಿ) ಕ್ರೀಡೆಗಳು, ಮನರಂಜನೆ, ಅಂತರಾಷ್ಟ್ರೀಯ ಸಮ್ಮೇಳನ ನಡೆಸುವುದು, ಸ್ಥಳೀಯ ಆಹಾರ ಮೇಳ, ಜವಳಿ, ಬಂಗಾರದ ಆಭರಣಗಳು, ಗೊಂಬೆಗಳ ವಸ್ತು ಪ್ರದರ್ಶನ ಮತ್ತು ಮಾರುಕಟ್ಟೆಯನ್ನು ಪ್ರೋತ್ಸಾಹಿಸುವುದಕ್ಕಾಗಿ;

(ಡಿ) ಮೇಲಿನ ಧ್ಯೇಯೋದ್ದೇಶಗಳಿಗೆ ಅನುಕೂಲವಾಗುವ ಕ್ಷೇತ್ರಗಳ ಸುಸ್ಥಿರ ಅಭಿವೃದ್ಧಿಗಾಗಿ; ಮತ್ತು ಇದಕ್ಕೆ ಪ್ರಾಸಂಗಿಕವಾದ ವಿಷಯಗಳಿಗಾಗಿ;

-ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರದ ರಚನೆಗಾಗಿ ಉಪಬಂಧ ಕಲ್ಪಿಸುವ ಒಂದು ಅಧಿನಿಯಮ.

ಇದು ಭಾರತ ಗಣರಾಜ್ಯದ ಎಪ್ಪತ್ತೈದನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-**(1) ಈ ಅಧಿನಿಯಮವನ್ನು ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024 ಎಂದು ಕರೆಯತಕ್ಕದ್ದು.

(2) ಇದು, ಸರ್ಕಾರವು ಅಧಿಸೂಚನೆಯ ಮೂಲಕ ಗೊತ್ತುಪಡಿಸಬಹುದಾದಂಥ [1][ದಿನಾಂಕ][1]ದಂದು ಜಾರಿಗೆ ಬರತಕ್ಕದ್ದು.

1. ಈ ಅಧಿನಿಯಮವು ಅಧಿಸೂಚನೆ ಸಂಖ್ಯೆ: ನಅಇ 18 ಟಿಎಂಡಿ 2023(1), ದಿ:23.05.2025ರ ಮೂಲಕ ದಿನಾಂಕ: 23.05.2025 ರಿಂದ ಜಾರಿಗೆ ಬಂದಿರುತ್ತದೆ. (ಅಧಿಸೂಚನೆಯನ್ನು ಅಧಿನಿಯಮದ ಕೊನೆಯಲಿ ನೋಡಬಹುದು).

**2. ಪರಿಭಾಷೆಗಳು.-** ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "**ಪ್ರಾಧಿಕಾರ**" ಎಂದರೆ, 3ನೇ ಪ್ರಕರಣದ ಅಡಿಯಲ್ಲಿ ರಚಿಸಲಾದ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ;

(ಬಿ) "**ಆಯುಕ್ತ**" ಎಂದರೆ, 4ನೇ ಪ್ರಕರಣದ ಅಡಿಯಲ್ಲಿ ನೇಮಿಸಿದ ಪ್ರಾಧಿಕಾರದ ಆಯುಕ್ತ;

(ಸಿ) **"ಕರಾರು"** ಎಂದರೆ, ಈ ಅಧಿನಿಯಮದ ಮೇರೆಗೆ ಮಾಡಿಕೊಂಡ ಕರಾರು.

(ಡಿ) **"ಅಧ್ಯಕ್ಷರು"** ಎಂದರೆ, ಪ್ರಾಧಿಕಾರದ ಅಧ್ಯಕ್ಷರು;

(ಇ) **"ನಿಧಿ"** ಎಂದರೆ, ಪ್ರಾಧಿಕಾರದ ನಿಧಿ;

(ಎಫ್) **"ಸ್ಥಳೀಯ ಪ್ರಾಧಿಕಾರ"** ಎಂದರೆ, ನಗರ ಪಾಲಿಕೆ, ನಗರಸಭೆ, ಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ಪಟ್ಟಣ ಪಂಚಾಯಿತಿ ಮತ್ತು ಯಾವುದರ ಸ್ಥಳೀಯ

ಪರಿಮಿತಿಗಳೊಳಗಿನ ಯಾವುದೇ ಭೂಮಿಯು ಕರ್ನಾಟಕ ಪಟ್ಟಣ ಮತ್ತು ಗ್ರಾಮಾಂತರ ಯೋಜನೆ ಅಧಿನಿಯಮ, 1961 (1963ರ ಕರ್ನಾಟಕ ಅಧಿನಿಯಮ 11)ರ ಅಡಿಯಲ್ಲಿ ಸಿದ್ಧಪಡಿಸಿದ ಅಥವಾ ಸಿದ್ಧಪಡಿಸಲಾಗುವ ಒಂದು ಯೋಜನೆಯ ಪ್ರದೇಶದಲ್ಲಿ ಬರುವ ಸಂದರ್ಭದಲ್ಲಿ ಆ ಸ್ಥಳೀಯ ಪ್ರಾಧಿಕಾರವು `ಸಂಬಂಧಪಟ್ಟ ಸ್ಥಳೀಯ ಪ್ರಾಧಿಕಾರವಾಗುತ್ತದೆ';

(ಜಿ) "**ಸದಸ್ಯ**" ಎಂದರೆ, ಪ್ರಾಧಿಕಾರದ ಸದಸ್ಯ;

(ಎಚ್) "**ವಿನಿಯಮ**" ಎಂದರೆ, ಈ ಅಧಿನಿಯಮದಡಿ ಮಾಡಲಾದ ವಿನಿಯಮಗಳು;

(ಐ) "**ನಿಯಮ**" ಎಂದರೆ, ಈ ಅಧಿನಿಯಮದಡಿ ಮಾಡಲಾದ ನಿಯಮಗಳು; ಮತ್ತು

(ಜೆ) "**ಅನುಸೂಚಿ**" ಎಂದರೆ, ಈ ಅಧಿನಿಯಮಕ್ಕೆ ಅನುಬಂಧಿಸಲಾದ ಅನುಸೂಚಿ.

**3. ಪ್ರಾಧಿಕಾರದ ರಚನೆ.-** (1) ಈ ಅಧಿನಿಯಮದ ಉದ್ದೇಶಗಳಿಗಾಗಿ ಅಧಿಸೂಚನೆ ಮೂಲಕ ಗೊತ್ತುಪಡಿಸಿದ ದಿನಾಂಕದ ತರುವಾಯ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರವೆಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ರಚಿಸತಕ್ಕದ್ದು.

(2) ಪ್ರಾಧಿಕಾರವು ಈ ಅಧಿನಿಯಮದ ಉಪಬಂಧಗಳಿಗೆ ಒಳಪಟ್ಟು ಶಾಶ್ವತ ಉತ್ತರಾಧಿಕಾರ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಆರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(3) ಪ್ರಾಧಿಕಾರವು ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

| | | |
|---|---|---|
| (ಎ) | ಗದಗ ಜಿಲ್ಲೆಯ ಉಸ್ತುವಾರಿ ಮಂತ್ರಿ | ಅಧ್ಯಕ್ಷರು |
| (ಬಿ) | ಪೌರಾಡಳಿತ ಇಲಾಖೆಯ ಪ್ರಭಾರದಲ್ಲಿರುವ ಮಂತ್ರಿ | ಉಪಾಧ್ಯಕ್ಷರು |
| (ಸಿ) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಮತಕ್ಷೇತ್ರವನ್ನು ಪ್ರತಿನಿಧಿಸುವ ವಿಧಾನ ಸಭೆ ಸದಸ್ಯರು | ಪದನಿಮಿತ್ತ ಸದಸ್ಯರು |
| [1][(ಸಿ-i) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಸಂಸತ್ ಸದಸ್ಯರು | ಪದನಿಮಿತ್ತ ಸದಸ್ಯರು |
| (ಸಿ-ii) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಕರ್ನಾಟಕ ರಾಜ್ಯ ವಿಧಾನ ಪರಿಷತ್ ಸದಸ್ಯರುಗಳ ಪೈಕಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರು ನಾಮನಿರ್ದೇಶಿಸಿದ ಒಬ್ಬ ಸದ್ಯಸ್ಯರು | ಪದನಿಮಿತ್ತ ಸದಸ್ಯರು |
| (ಸಿ-iii) | ಅಧ್ಯಕ್ಷರು, ನಗರ ಸಭೆ, ಗದಗ -ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-iv) | ವಿರೋಧ ಪಕ್ಷದ ನಾಯಕರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-v) | ಉಪಾಧ್ಯಕ್ಷರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-vi) | ಗದಗ-ಬೆಟಗೇರಿ ನಗರ ಸಭೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, | ಪದನಿಮಿತ್ತ ಸದಸ್ಯರು][1] |
| (ಡಿ) | ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ | ಪದನಿಮಿತ್ತ ಸದಸ್ಯರು |

| | | |
|---|---|---|
| (ಇ) | ಜಿಲ್ಲಾಧಿಕಾರಿ, ಗದಗ ಜಿಲ್ಲೆ | ಮುಖ್ಯ ಕಾರ್ಯನಿರ್ವಹಣಾಧಿಕಾ ರಿ |
| (ಎಫ್) | ಮುಖ್ಯ ಕಾರ್ಯನಿರ್ವಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಗದಗ ಜಿಲ್ಲೆ | ಪದನಿಮಿತ್ತ ಸದಸ್ಯರು |
| (ಜಿ) | ಪೊಲೀಸ್ ಅಧೀಕ್ಷಕರು, ಗದಗ ಜಿಲ್ಲೆ | ಪದನಿಮಿತ್ತ ಸದಸ್ಯರು |
| (ಎಚ್) | ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಗದಗ ಜಿಲ್ಲೆ. | ಸದಸ್ಯ ಕಾರ್ಯದರ್ಶಿ |
| (ಐ) | ಕಾರ್ಯಪಾಲಕ ಅಭಿಯಂತರ, ಲೋಕೋಪಯೋಗಿ ಇಲಾಖೆ, ಗದಗ ಜಿಲ್ಲೆ. | ಪದನಿಮಿತ್ತ ಸದಸ್ಯರು |
| (ಜೆ) | ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರ, ಗದಗ ಜಿಲ್ಲೆ | ಪದನಿಮಿತ್ತ ಸದಸ್ಯರು |
| (ಕೆ) | ಆಯುಕ್ತರು, ಗದಗ-ಬೆಟಗೇರಿ ನಗರ ಸಭೆ, ಗದಗ ಜಿಲ್ಲೆ | ಪದನಿಮಿತ್ತ ಸದಸ್ಯರು |
| (ಎಲ್) | ಉಪ ನಿರ್ದೇಶಕ (ಆಡಳಿತ), ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಗದಗ ಜಿಲ್ಲೆ. | ಪದನಿಮಿತ್ತ ಸದಸ್ಯರು |
| (ಎಂ) | ಸಹಾಯಕ ನಿರ್ದೇಶಕ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಗದಗ ಜಿಲ್ಲೆ. | ಪದನಿಮಿತ್ತ ಸದಸ್ಯರು |
| (ಎನ್) | ಸಹಾಯಕ ನಿರ್ದೇಶಕ, ಪ್ರವಾಸೋದ್ಯಮ ಇಲಾಖೆ, ಗದಗ ಜಿಲ್ಲೆ. | ಪದನಿಮಿತ್ತ ಸದಸ್ಯರು |
| (ಒ) | ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರವು ನಾಮನಿರ್ದೇಶಿಸಿದ ಮೂವರು ಸರ್ಕಾರೇತರ ಸದಸ್ಯರು | ಸದಸ್ಯರು |
| (ಪಿ) | ನಗರ ಇಂಜಿನಿಯರಿಂಗ್, ಯೋಜನೆ ಮತ್ತು ವಾಸ್ತುಶಿಲ್ಪ ಕ್ಷೇತ್ರದಲ್ಲಿನ ಐವರು ತಜ್ಞರು | ಆಹ್ವಾನಿತ ಸದಸ್ಯರು |

1. 2025 ರ ಅಧಿನಿಯಮ ಸಂಖ್ಯೆ:66ರ ಮೂಲಕ ದಿ:23.05.2025 ರಿಂದ ಜಾರಿಗೆ ಬರುವಂತೆ ಸೇರಿಸಲಾಗಿದೆ.

**4. ಆಯುಕ್ತರ ನೇಮಕಾತಿ.-** ರಾಜ್ಯ ಸರ್ಕಾರವು, ಒಬ್ಬ ಕರ್ನಾಟಕ ಆಡಳಿತ ಸೇವೆಗಳ (ಕಿರಿಯ ಶ್ರೇಣಿ) ಅಧಿಕಾರಿ ದರ್ಜೆಗಿಂತ ಕಡಿಮೆಯಲ್ಲದ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತನನ್ನಾಗಿ ನೇಮಕ ಮಾಡತಕ್ಕದ್ದು.

**5.ಆಯುಕ್ತರ ಕರ್ತವ್ಯಗಳು.-** (1) ಆಯುಕ್ತನು ಪ್ರಾಧಿಕಾರದ ಮುಖ್ಯ ಆಡಳಿತಾಧಿಕಾರಿಯಾಗಿರತಕ್ಕದ್ದು.

(2) ಆಯುಕ್ತನು ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾದ ಅಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ,-

(ಎ) ಪ್ರಾಧಿಕಾರದ ಮುಖ್ಯ ಆಡಳಿತಾಧಿಕಾರಿಯಾಗಿರತಕ್ಕದ್ದು;

(ಬಿ) ಪ್ರಾಧಿಕಾರದ ಎಲ್ಲಾ ಆಯವ್ಯಯ ಯೋಜನೆ, ಜಾರಿಗೊಳಿಸುವಿಕೆ ಮತ್ತು ಮೇಲ್ವಿಚಾರಣೆ ಪ್ರಕಾರ್ಯಗಳಿಗೆ ಜವಾಬ್ದಾರನಾಗಿರತಕ್ಕದ್ದು;

(ಸಿ) ಪ್ರಾಧಿಕಾರದ ಆಡಳಿತ ಮತ್ತು ಲೆಕ್ಕಪತ್ರಗಳಿಗೆ ಸಂಬಂಧಿಸಿದ ಎಲ್ಲ ಮಾಹಿತಿಯನ್ನು ಹಾಗೂ ಪ್ರಾಧಿಕಾರವು ಒದಗಿಸಲು ಕೋರಿದಾಗಲೆಲ್ಲ ಇತರ ವಿಷಯಗಳ ಮಾಹಿತಿಯನ್ನು ಪ್ರಾಧಿಕಾರಕ್ಕೆ ಒದಗಿಸತಕ್ಕದ್ದು;

(ಡಿ) ಪ್ರತಿ ಆರ್ಥಿಕ ವರ್ಷವು ಮುಕ್ತಾಯವಾದ ಮೂರು ತಿಂಗಳುಗಳ ಒಳಗೆ ಪ್ರಾಧಿಕಾರದ ವಾರ್ಷಿಕ ವರದಿಗಳನ್ನು ಮತ್ತು ಲೆಕ್ಕ ಪರಿಶೋಧಿತ ಲೆಕ್ಕಪತ್ರಗಳನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಅನುಮೋದನೆಗಾಗಿ ಒಪ್ಪಿಸತಕ್ಕದ್ದು ಹಾಗೂ ತರುವಾಯ ಅದರ ಪ್ರತಿಗಳನ್ನು ಪ್ರಾಧಿಕಾರಕ್ಕೆ ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು; ಮತ್ತು

(ಇ) ನಿಯಮಿಸಬಹುದಾದಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸತಕ್ಕದ್ದು.

**6. ಯೋಜನಾಧಿಕಾರಿ ಮತ್ತು ಅಭಿಯಂತರರ ನೇಮಕಾತಿ.-** (1) ರಾಜ್ಯ ಸರ್ಕಾರವು, ನಗರ ಯೋಜನೆಯ ಸಹಾಯಕ ನಿರ್ದೇಶಕರ ದರ್ಜೆಗೆ ಕಡಿಮೆಯಲ್ಲದ ಗದಗಿನ ನಗರ ಯೋಜನಾ ಇಲಾಖೆಯ ಒಬ್ಬ ಅಧಿಕಾರಿಯನ್ನು ಮತ್ತು ಗದಗಿನ ಲೋಕೋಪಯೋಗಿ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರ ದರ್ಜೆಗೆ ಕಡಿಮೆಯಲ್ಲದ ಅಭಿಯಂತರನನ್ನು ಅನುಕ್ರಮವಾಗಿ ಯೋಜನಾಧಿಕಾರಿಯನ್ನಾಗಿ ಮತ್ತು ಅಭಿಯಂತರನನ್ನಾಗಿ ನೇಮಿಸತಕ್ಕದ್ದು.

(2) ಯೋಜನಾಧಿಕಾರಿಯು ಮತ್ತು ಅಭಿಯಂತರರು ಆಯುಕ್ತನ ಮುಂದೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಮತ್ತು ನಿಯಮಿಸಬಹುದಾದಂತೆ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

**7. ಲೆಕ್ಕಾಧಿಕಾರಿ ಮುಂತಾದವರ ನೇಮಕಾತಿ.-** (1) ರಾಜ್ಯ ಸರ್ಕಾರವು, ರಾಜ್ಯ ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನಾ ಸೇವೆಯ ಗ್ರೂಪ್ `ಎ' (ಕಿರಿಯ ಶ್ರೇಣಿ) ಅಧಿಕಾರಿಯ ದರ್ಜೆಗೆ ಕಡಿಮೆಯಲ್ಲದ ಒಬ್ಬ ಅಧಿಕಾರಿಯನ್ನು ಪ್ರಾಧಿಕಾರದ ಲೆಕ್ಕಧಿಕಾರಿಯನ್ನಾಗಿ ನೇಮಿಸತಕ್ಕದ್ದು.

(2) ಲೆಕ್ಕಧಿಕಾರಿಯು ಆಯುಕ್ತನ ಮುಂದೆ ಕರ್ತವ್ಯಕ್ಕೆ ಹಾಜರಾಗತಕ್ಕದ್ದು ಮತ್ತು ನಿಯಮಿಸಬಹುದಾದ ಅಂಥ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ರಾಜ್ಯ ಸರ್ಕಾರವು, ಪ್ರಾಧಿಕಾರಕ್ಕೆ ಅವಶ್ಯಕವಾಗಬಹುದಾದ ಅಂಥ ಇತರ ಅಧಿಕಾರಿಗಳು ಮತ್ತು ಸಿಬ್ಬಂದಿಯನ್ನು ಒದಗಿಸತಕ್ಕದ್ದು. ಪ್ರಾಧಿಕಾರದ ಅಧಿಕಾರಿಗಳ ಮತ್ತು ಸಿಬ್ಬಂದಿಯ ಸೇವಾ ಷರತ್ತುಗಳು ಹಾಗೂ ಅಧಿಕಾರಗಳು ಮತ್ತು ಕರ್ತವ್ಯಗಳು ವಿನಿಯಮಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಇರತಕ್ಕದ್ದು.

(4) ಪ್ರಾಧಿಕಾರದ ಶಿಫಾರಸ್ಸು ಮತ್ತು ಅನುಮೋದನೆಯೊಂದಿಗೆ ಕಾಲಕಾಲಕ್ಕೆ ಉದ್ಭವಿಸುವ ಅಗತ್ಯ ಲಿಪಿಕ ಮತ್ತು ಸಹಾಯಕ ಸಿಬ್ಬಂದಿಯನ್ನು ಆರ್ಥಿಕ ಇಲಾಖೆಯ ಸಮ್ಮತಿಯೊಂದಿಗೆ ಸೃಜಿಸುವುದು ಮತ್ತು ಮಂಜೂರು ಮಾಡುವುದು.

(5) ಇತರೆ ಸಹಾಯಕ ಸಿಬ್ಬಂದಿಯಾದಂಥ ಗ್ರೂಪ್-ಡಿ, ವಾಹನ ಚಾಲಕರು ಇತ್ಯಾದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತಾತ್ಕಾಲಿಕವಾಗಿ ನಿಯೋಜಿಸಬಹುದು, ಅದಕ್ಕಾಗಿ ಪ್ರಾಧಿಕಾರದ ನಿಧಿಗಳಿಂದ ಸಂಭಾವನೆಯನ್ನು ಸಂದಾಯ ಮಾಡಬಹುದು.

(6) ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳು, ಅಧಿಕಾರಿಗಳ ಮತ್ತು ಸಿಬ್ಬಂದಿಯ ವೇತನ ಮತ್ತು ಭತ್ಯೆಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

**8. ಪ್ರಾಧಿಕಾರದ ಅಧಿಕಾರಗಳು.-** (1) ಪ್ರಾಧಿಕಾರವು, ಸಾಮಾನ್ಯವಾಗಿ ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ವ್ಯಾಪ್ತಿಯ ಪ್ರದೇಶದಲ್ಲಿ ಈ ಅಧಿನಿಯಮದ ಉದ್ದೇಶ ಮತ್ತು ಉಪಬಂಧಗಳನ್ನು

ಜಾರಿಗೊಳಿಸುವುದಕ್ಕೆ ಅವಶ್ಯವೆಂದು ತಾನು ಭಾವಿಸುವಂಥ ಯಾವುದೇ ಕಾರ್ಯವನ್ನು ಮಾಡುವ ಅಧಿಕಾರವನ್ನು ಹೊಂದಿರತಕ್ಕದ್ದು.

(2) (1)ನೇ ಉಪಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು ಈ ಮುಂದಿನವುಗಳಿಗಾಗಿ ಅಧಿಕಾರವನ್ನು ಹೊಂದಿರತಕ್ಕದ್ದು,-

(i) ಈ ಅಧಿನಿಯಮದ ಯಾವುದೇ ಉದ್ದೇಶಗಳನ್ನು ಈಡೇರಿಸುವುದಕ್ಕಾಗಿ ಅವಶ್ಯಕ ಅಥವಾ ಯುಕ್ತವೆಂದು ಅದು ಪರಿಗಣಿಸುವಂಥ ಎಲ್ಲಾ ಕರಾರುಗಳನ್ನು ಮಾಡಿಕೊಳ್ಳುವುದು ಮತ್ತು ನಿರ್ವಹಿಸುವುದು ಹಾಗೂ ಪ್ರತಿಯೊಂದು ಕರಾರನ್ನು ಪ್ರಾಧಿಕಾರದ ಪರವಾಗಿ ಪ್ರಾಧಿಕಾರದ ಆಯುಕ್ತನು ಮಾಡಿಕೊಳ್ಳತಕ್ಕದ್ದು:

ಪರಂತು, ಐವತ್ತು ಲಕ್ಷ ರೂಪಾಯಿಗಳು ಮತ್ತು ಹೆಚ್ಚಿನ ವೆಚ್ಚವನ್ನು ಒಳಗೊಂಡ ಯಾವುದೇ ಕರಾರನ್ನು ರಾಜ್ಯ ಸರ್ಕಾರದ ಪೂರ್ವಾನುಮತಿ ಪಡೆಯದೆ ಮಾಡಿಕೊಳ್ಳತಕ್ಕದ್ದಲ್ಲ.

(ii) ರಾಜ್ಯ ಸರ್ಕಾರದ ಪೂರ್ವಾನುಮತಿಯೊಂದಿಗೆ ಮತ್ತು ರಾಜ್ಯ ಸರ್ಕಾರವು ನಿಗದಿಪಡಿಸಬಹುದಾದಂಥ ಷರತ್ತುಗಳಿಗೆ ಒಳಪಟ್ಟು ಅಭಿವೃದ್ಧಿಗಾಗಿನ ಯಾವುದೇ ಯೋಜನೆ ಅಥವಾ ಪ್ರಾಜೆಕ್ಟ್ ಅಥವಾ ಸ್ಕೀಮಿಗೆ ಹಣವನ್ನು ಎತ್ತುವುದು ಮತ್ತು ಅಂಥ ಯೋಜನೆ, ಪ್ರಾಜೆಕ್ಟ್ ಅಥವಾ ಸ್ಕೀಮಿನ ನಿರ್ವಹಣೆಗಾಗಿ ಆ ಪ್ರದೇಶದಲ್ಲಿನ ಸ್ಥಳೀಯ ಪ್ರಾಧಿಕಾರಗಳಿಗೆ ನೆರವು ನೀಡುವುದು;

(iii) ಅನುಸೂಚಿತ ಪ್ರದೇಶದ ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು;

(iv) ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಗೊಳಿಸಲು ಅವಶ್ಯವಾಗಬಹುದಾದಷ್ಟು ಸಂಖ್ಯೆಯ ಸ್ಕೀಮುಗಳನ್ನು ರೂಪಿಸುವುದು;

(v) ಅಭಿವೃದ್ಧಿ ಯೋಜನೆ, ನಗರ ಯೋಜನಾ ಸ್ಕೀಮುಗಳ ಮತ್ತು ಸದರಿ ಯೋಜನೆ ಮತ್ತು ಸ್ಕೀಮುಗಳಿಗೆ ಅನುಸಾರವಾಗಿ ಅಭಿವೃದ್ಧಿಯ ಜಾರಿಯನ್ನು ಸುನಿಶ್ಚಿತಗೊಳಿಸುವುದು ಮತ್ತು ಸಮನ್ವಯಗೊಳಿಸುವುದು;

(vi) ರಾಜ್ಯ ಸರ್ಕಾರವು ವಹಿಸಬಹುದಾದ ಅಥವಾ ಪ್ರಾಧಿಕಾರವನ್ನು ಯಾವ ಉದ್ದೇಶಗಳಿಗಾಗಿ ರಚಿಸಲಾಗಿದೆಯೋ ಆ ಉದ್ದೇಶಗಳ ಈಡೇರಿಕೆಗಾಗಿ ಅವಶ್ಯಕವಾಗಬಹುದಾದ ಯಾವುದೇ ವಿಷಯಗಳಿಗೆ ಅಗತ್ಯವಾಗಬಹುದಾದ ಅಥವಾ ಪ್ರಾಸಂಗಿಕವಾಗಬಹುದಾದ ಅಥವಾ ಅನುಕೂಲಕರವಾಗಬಹುದಾದ ಅಂಥ ಇತರ ಕಾರ್ಯಗಳನ್ನು ಮತ್ತು ಕೆಲಸಗಳನ್ನು ಮಾಡುವುದು;

(vii) ಅನುಸೂಚಿತ ಪ್ರದೇಶದ ಪರಿಮಿತಿಯೊಳಗೆ ಅಧಿಕಾರ ವ್ಯಾಪ್ತಿಯನ್ನು ಚಲಾಯಿಸುವ ಸ್ಥಳಿಯ ಸಂಸ್ಥೆಗಳ ಮತ್ತು ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿನಿಯಮ, 1987 (1987ರ ಕರ್ನಾಟಕ ಅಧಿನಿಯಮ ಸಂಖ್ಯೆ 34)ರ ಮೇರೆಗೆ ರಚಿಸಿದ ನಗರಾಭಿವೃದ್ಧಿ ಮಂಡಳಿ ಯಾವುದಾದರೂ ಇದ್ದರೆ ಅದರ ಮತ್ತು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಅನುಸೂಚಿತ ಪ್ರದೇಶದಲ್ಲಿನ ಅಭಿವೃದ್ಧಿ ಕಾರ್ಯಚಟುವಟಿಕೆಗಳಿಗೆ ಸಂಬಂಧಿಸಿದಂಥ ಇತರ ಸಂಸ್ಥೆಗಳ ಕಾರ್ಯಚಟುವಟಿಕೆಗಳೊಂದಿಗೆ ಸಮನ್ವಯ ಸಾಧಿಸತಕ್ಕದ್ದು;

(viii) ಯೋಜನೆಯ ಅಡಿಯಲ್ಲಿ ವಹಿಸಿದ ವೆಚ್ಚದ ಪ್ರಗತಿಯ ಬಗ್ಗೆ ಹಾಗೂ ಯೋಜನೆಗೆ ಸಂಬಂಧಿಸಿದಂತೆ ವಿವಿಧ ಅಭಿವೃದ್ಧಿ ಇಲಾಖೆಗಳ ಮತ್ತು ಸ್ಥಳೀಯ ಪ್ರಾಧಿಕಾರ ಕಾರ್ಯನಿರ್ವಹಣೆಯ ಬಗ್ಗೆ ಮೇಲ್ವಿಚಾರಣೆ ನಡೆಸುವುದು ಮತ್ತು ಪುನರೀಕ್ಷಿಸುವುದು;

(ix) ನಿಯಮಿಸಬಹುದಾದಂಥ ಇತರ ಪ್ರಕಾರ್ಯಗಳನ್ನು ನಿರ್ವಹಿಸುವುದು,

**9**. **ಪ್ರಾಧಿಕಾರದ ಸಭೆಗಳು:-** (1) ಜಿಲ್ಲಾಧಿಕಾರಿಯು, ಅಧ್ಯಕ್ಷರ ಪೂರ್ವಾನುಮೋದನೆ ಪಡೆದು ಅಧ್ಯಕ್ಷರು ಸೂಕ್ತವೆಂದು ಭಾವಿಸಬಹುದಾದಂಥ ಮಧ್ಯಂತರಗಳಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದಂಥ ಸ್ಥಳದಲ್ಲಿ ಪ್ರಾಧಿಕಾರದ ಸಭೆಯನ್ನು ನಡೆಸತಕ್ಕದ್ದು:

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ನಾಲ್ಕು ಬಾರಿ ಸಭೆ ಸೇರತಕ್ಕದ್ದು.

(2) ಅಧ್ಯಕ್ಷರು ಪ್ರತಿಯೊಂದು ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು ಮತ್ತು ಅಧ್ಯಕ್ಷರು ಯಾವುದೇ ಕಾರಣಕ್ಕಾಗಿ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ ಉಪಾಧ್ಯಕ್ಷರು ಸಭೆಯ ಅಧ್ಯಕ್ಷತೆಯನ್ನು ವಹಿಸತಕ್ಕದ್ದು.

(3) ಹಾಜರಿರುವ ಮತ್ತು ಮತ ಚಲಾಯಿಸುವ ಸದಸ್ಯರ ಸರ್ವಾನುಮತದಿಂದ ಪ್ರಾಧಿಕಾರದ ನಿರ್ಣಯಗಳನ್ನು ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ಮುಂದೆ ನಿರ್ಣಯಕ್ಕಾಗಿ ಬರುವ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯವಿದಲ್ಲಿ ಜಿಲ್ಲಾಧಿಕಾರಿಯವರು ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳಲ್ಲಿ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಜಿಲ್ಲಾಧಿಕಾರಿಯವರು ಪ್ರಾಧಿಕಾರದ ನಿರ್ಣಯಗಳನ್ನು ಜಾರಿಗೆ ತರತಕ್ಕದ್ದು.

**10. ಕೆಲವು ನಿರ್ಣಯಗಳನ್ನು ಕೈಕೊಳ್ಳಲು ಅಧ್ಯಕ್ಷರ ವಿಶೇಷಾಧಿಕಾರ.-** ಅಧ್ಯಕ್ಷರು ಆ ವಿಷಯವು ತುರ್ತು ಸ್ವರೂಪದ್ದಾಗಿದೆ, ಪ್ರಕರಣ 9ರ ಅಡಿಯಲ್ಲಿ ಪ್ರಾಧಿಕಾರದ ಸಭೆಯನ್ನು ಕರೆಯುವ ಅಗತ್ಯವಿಲ್ಲವೆಂದು ಅಭಿಪ್ರಾಯಪಟ್ಟಲ್ಲಿ, ಅವರು ಸೂಕ್ತವೆಂದು ಭಾವಿಸಬಹುದಾದಂಥ ಆದೇಶಗಳನ್ನು ಮಾಡತಕ್ಕದ್ದು ಮತ್ತು ಅದನ್ನು ಪ್ರಾಧಿಕಾರದ ನಿರ್ಣಯದಂತೆಯೇ ಅದೇ ರೀತಿಯಲ್ಲಿ ಅನುಷ್ಠಾನಗೊಳಿಸತಕ್ಕದ್ದು:

ಪರಂತು, ಅಧ್ಯಕ್ಷರು ಈ ಪ್ರಕರಣದ ಅಡಿಯಲ್ಲಿ ತೆಗದುಕೊಂಡ ಪ್ರತಿಯೊಂದು ನಿರ್ಣಯವನ್ನು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ಅದರ ಮುಂದೆ ಇಡತಕ್ಕದ್ದು ಮತ್ತು ಅನುಸಮರ್ಥನೆಯನ್ನು ಕೋರತಕ್ಕದ್ದು.

**11. ಪ್ರತ್ಯಾಯೋಜನೆ ಅಧಿಕಾರ.-** ಪ್ರಾಧಿಕಾರವು, ಅಧಿಸೂಚನೆಯ ಮೂಲಕ, ವಿನಿಯಮಗಳ ರಚನಾಧಿಕಾರವನ್ನು ಹೊರತುಪಡಿಸಿ, ಈ ಅಧಿನಿಯಮದ ಅಡಿಯಲ್ಲಿ ತಾನು ಚಲಾಯಿಸಬಹುದಾದ ಯಾವುದೇ ಅಧಿಕಾರವನ್ನು, ಅಧ್ಯಕ್ಷರು ಅಥವಾ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂತೆ ಪ್ರಾಧಿಕಾರದ ಅಂಥ ಅಧಿಕಾರಿಯು ಅದರಲ್ಲಿ ನಿರ್ದಿಷ್ಟಪಡಿಸಬಹುದಾದಂಥ ನಿರ್ಬಂಧಗಳು ಮತ್ತು ಷರತ್ತುಗಳಿಗೆ ಒಳಪಟ್ಟು ಚಲಾಯಿಸಲು ನಿರ್ದೇಶನ ನೀಡಬಹುದು.

**12 ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳತಕ್ಕದ್ದಲ್ಲ.-** (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದಾಗ್ಯೂ, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ, ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅನುಸೂಚಿತ ಪ್ರದೇಶದಲ್ಲಿ ಯಾವುದೇ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳತಕ್ಕದ್ದಲ್ಲ.

(2) ಅನುಸೂಚಿತ ಪ್ರದೇಶದಲ್ಲಿ ಅಭಿವೃದ್ಧಿಗಾಗಿ ಪ್ರಾಧಿಕಾರವು ಅನುಮತಿ ನೀಡಿದ್ದ ಹೊರತು (1)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಿದ ಯಾವುದೇ ಅಭಿವೃದ್ಧಿಗಾಗಿ ಸ್ಥಳೀಯ ಪ್ರಾಧಿಕಾರವು ಅನುಮತಿ ನೀಡತಕ್ಕದ್ದಲ್ಲ.

(3) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲು ಇಚ್ಛಿಸುವ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲು ಅನುಮತಿಯನ್ನು ನೀಡುವುದಕ್ಕಾಗಿ ಪ್ರಾಧಿಕಾರಕ್ಕೆ ಲಿಖಿತದಲ್ಲಿ ಅರ್ಜಿ ಸಲ್ಲಿಸತಕ್ಕದ್ದು.

(4) ಪ್ರಾಧಿಕಾರವು, ತಾನು ಅವಶ್ಯಕವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ಷರತ್ತುಗಳಿಲ್ಲದೆ ಅಥವಾ ತಾನು ವಿಧಿಸುವುದು ಸೂಕ್ತವೆಂದು ಭಾವಿಸಬಹುದಾದಂಥ ಷರತ್ತುಗಳೊಡನೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ನೀಡಲು ನಿರಾಕರಿಸಬಹುದು.

(5) (4)ನೇ ಉಪ ಪ್ರಕರಣದ ಅಡಿಯಲ್ಲಿಯ ಪ್ರಾಧಿಕಾರದ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು, ಆ ಕುರಿತ ಅದರ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ ಬಾಧಿತವಾದ ಪ್ರಾಧಿಕಾರವು, ಕೇಂದ್ರ ಸರ್ಕಾರದ ಆಡಳಿತಾತ್ಮಕ ನಿಯಂತ್ರಣದಲ್ಲಿದ್ದಲಿ, ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದ ತರುವಾಯ ಅಪೀಲಿನ ಬಗ್ಗೆ ತೀರ್ಮಾನಿಸತಕ್ಕದ್ದು.

(6) ಯಾರೇ ವ್ಯಕ್ತಿ ಅಥವಾ ಯಾವುದೇ ಇತರ ಮಂಡಳಿಯು (5)ನೇ ಉಪ-ಪ್ರಕರಣದಲ್ಲಿ ಮಾರ್ಪಡಿಸಿದಂತೆ (4)ನೇ ಉಪ-ಪ್ರಕರಣದ ಮೇರೆಗೆ ನೀಡಿದ ನಿರ್ಣಯಕ್ಕೆ ವಿರುದ್ಧವಾಗಿ ಯಾವುದೇ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡರೆ, ಪ್ರಾಧಿಕಾರವು ಅಂಥ ನಿರ್ಣಯಕ್ಕೆ ವಿರುದ್ಧವಾಗಿ ಕೈಗೊಂಡ ಯಾವುದೇ ಅಭಿವೃದ್ಧಿ ಕಾಮಗಾರಿಯನ್ನು ಬೀಳಿಸುವ, ಕೆಡಹುವ ಅಥವಾ ತೆರವುಗೊಳಿಸುವ ಮತ್ತು ಕಾನೂನಿನ ಯುಕ್ತ ಕ್ರಮವನ್ನು ಅನುಸರಿಸಿ ಸಂಬಂಧಪಟ್ಟ ವ್ಯಕ್ತಿ ಅಥವಾ ಪ್ರಾಧಿಕಾರದಿಂದ ಅಂಥ ಬೀಳಿಸುವಿಕೆ, ಕೆಡಹುವಿಕೆ ಅಥವಾ ತೆರವುಗೊಳಿಸುವ ವೆಚ್ಚವನ್ನು ವಸೂಲು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರತಕ್ಕದ್ದು.

**13. ಅಭಿವೃದ್ಧಿ ಯೋಜನೆ ಸಿದ್ಧತೆ, ಅದರ ಅನುಮೋದನೆ ಮತ್ತು ಜಾರಿ.-** (1) ಪ್ರಾಧಿಕಾರವು ಅದು ರಚನೆಯಾದ ಕೂಡಲೆ, ಸರ್ಕಾರಿ-ಖಾಸಗಿ ಸಹಭಾಗಿತ್ವದ ಮಾದರಿಯಲ್ಲಿ ಇಂಜಿನಿಯರಿಂಗ್, ಆಟೋಮೊಬೈಲ್, ಮರಮುಟ್ಟು ಮತ್ತು ಕರಕುಶಲ, ಐಟಿ-ಬಿಟಿಗಳಂಥ ಉದ್ಯಮ ವಲಯಗಳನ್ನು ಪೋಷಿಸುವ ಅಂತರಾಷ್ಟ್ರೀಯ ವಸ್ತು ಪ್ರದರ್ಶನ ಮತ್ತು ಸಂವಾದ ಕೇಂದ್ರವನ್ನಾಗಿ ಮತ್ತು ಮಾಹಿತಿ ಕೇಂದ್ರವನ್ನಾಗಿ ಆ ಕ್ಷೇತ್ರವನ್ನು ಅಭಿವೃದ್ಧಿಪಡಿಸುವುದಕ್ಕಾಗಿ ಯೋಜನೆಯನ್ನು ಸಿದ್ಧಪಡಿಸತಕ್ಕದ್ದು.

(2) ಅಭಿವೃದ್ಧಿ ಯೋಜನೆಯು,-

(ಎ) ಪ್ರಾಧಿಕಾರದ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯಕವಾಗಿರುವ ಭೂಮಿಯ ಸ್ವಾಧೀನ ಅಥವಾ ಖರೀದಿ, ವಿನಿಮಯ ಅಥವಾ ಅನ್ಯಥಾ ಸ್ವಾಧೀನಪಡಿಸಿಕೊಳ್ಳುವ ಪ್ರಸ್ತಾವನೆಗಳು;

(ಬಿ) ಸಾರ್ವಜನಿಕ ಉದ್ಯಾನವನಗಳು, ತೋಟಗಾರಿಕೆ ಅಥವಾ ಮೃಗಾಲಯಗಳು, ಕಾರಂಜಿ ಉದ್ಯಾನವನಗಳು, ಕೃತಕ ಜಲಪಾತಗಳು, ಆಟದ ಉದ್ಯಾನವನಗಳು, ಬೋಟಿಂಗ್ ಅಥವಾ ಇತರೆ ಜಲ ಕ್ರೀಡೆಗಳು ಅಥವಾ ಅಂಥ ಇತರೆ ಪ್ರವಾಸಿ ಆಕರ್ಷಣೆಗಳೊಂದಿಗೆ ಸರೋವರಗಳನ್ನು ನಿರ್ಮಾಣ ಮಾಡುವುದು;

(ಸಿ) ಅಗತ್ಯ ಸಾಲು ಅಂಗಡಿಗಳು ಮತ್ತು ವಾಣಿಜ್ಯ ಸಂಕೀರ್ಣಗಳ ನಿರ್ಮಾಣ ಮಾಡುವುದು;

(ಡಿ) ಒಳಚರಂಡಿ, ವಿದ್ಯುತ್ ಮತ್ತು ನೀರು ಸರಬರಾಜು ಮತ್ತು ನೈರ್ಮಲ್ಯವನ್ನು ಒದಗಿಸುವುದು;

(ಇ) ಪ್ರಾಧಿಕಾರದಡಿಯಲ್ಲಿ ಬರುವ ಪ್ರದೇಶದಲ್ಲಿ ಅಥವಾ ಅದಕ್ಕೆ ಹೊಂದಿಕೊಂಡಿರುವ ಪ್ರದೇಶದಲ್ಲಿ ಉತ್ತಮವಾದ ಗಾಳಿ ಬೆಳಕಿಗಾಗಿ ಬಯಲು ಪ್ರದೇಶಗಳನ್ನು ರೂಪಿಸುವುದು;

(ಎಫ್) ಕಟ್ಟಡಗಳ ನಿರ್ಮಾಣ ಮತ್ತು ಪುನರ್ ನಿರ್ಮಾಣ, ಅದರ ನಿರ್ವಹಣೆ ಮತ್ತು ಸಂರಕ್ಷಿಸುವುದು;

(ಜಿ) ಸಂವಹನ ಮತ್ತು ಸಾರಿಗೆ ಸೌಲಭ್ಯಗಳನ್ನು ಕಲ್ಪಿಸುವುದು; ಮತ್ತು

(ಎಚ್) ಖಾಸಗಿ ಸಾರ್ವಜನಿಕ ಸಹಭಾಗೀತ್ವ ಮಾದರಿಯನ್ನು ಸಿದ್ಧಪಡಿಸುವುದು ಮತ್ತು ಅದಕ್ಕೆ ಅನುಮತಿಯನ್ನು ನೀಡುವುದು,

- ಒಳಗೊಳ್ಳಬಹುದು:
  ಪರಂತು, ಹತ್ತು ಕೋಟಿ ರೂಪಾಯಿಗಳು ಅಥವಾ ಅದಕ್ಕಿಂತ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವ ಯಾವುದೇ ಅಂಥ ಮಾದರಿಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆ ಪಡೆಯತಕ್ಕದ್ದು.

(2) (1)ನೇ ಉಪಪ್ರಕರಣದ ಅಡಿಯಲ್ಲಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು ಜಿಲ್ಲಾಧಿಕಾರಿಯು ರಾಜ್ಯ ಸರ್ಕಾರಕ್ಕೆ ಅನುಮೋದನೆಗಾಗಿ ಕಳುಹಿಸತಕ್ಕದ್ದು. ರಾಜ್ಯ ಸರ್ಕಾರವು ಯಾವುದೇ ಮಾರ್ಪಾಡುಗಳೊಂದಿಗೆ ಅಥವಾ ಮಾರ್ಪಾಡುಗಳಿಲ್ಲದೆಯೇ ಯೋಜನೆಗೆ ಅನುಮೋದನೆಯನ್ನು ನೀಡಬಹುದು.

(3) ರಾಜ್ಯ ಸರ್ಕಾರವು (1)ನೇ ಉಪಪ್ರಕರಣದ ಅಡಿಯಲ್ಲಿ ಯೋಜನೆಯನ್ನು ಅನುಮೋದಿಸಿದ ನಂತರ ಪ್ರಾಧಿಕಾರದ ಶಿಫಾರಸ್ಸುಗಳ ಮೇಲೆ, ಕಾಲಕಾಲಕ್ಕೆ ಅದು ಯೋಜನೆಗೆ ಅಗತ್ಯವೆಂದು ಭಾವಿಸುವಂಥ ಮಾರ್ಪಾಡುಗಳನ್ನು ಮಾಡಬಹುದು.

(4) ಪ್ರಾಧಿಕಾರವು ಈ ಅಧಿನಿಯಮದಡಿಯಲ್ಲಿ ರಾಜ್ಯ ಸರ್ಕಾರದಿಂದ ಅನುಮೋದನೆಗೊಂಡ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವುದಕ್ಕೆ ಮತ್ತು ತಗಲುವ ವೆಚ್ಚವನ್ನು ಭರಿಸುವುದಕ್ಕೆ ಅಧಿಕಾರವನ್ನು ಹೊಂದಿರತಕ್ಕದ್ದು ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 (2000ರ ಕರ್ನಾಟಕ ಅಧಿನಿಯಮ, 29) ಮತ್ತು ಇತರೆ ಸಂಬಂಧಿತ ಅಧಿನಿಯಮಗಳ ಎಲ್ಲಾ ಉಪಬಂಧಗಳನ್ನು ಪಾಲಿಸತಕ್ಕದ್ದು.

**14. ಶುಲ್ಕ ವಿಧಿಸುವುದು.-** (1) ಅನುಮತಿಗಳ ನೀಡಿಕೆ, ವಸ್ತು ಪ್ರದರ್ಶನಗಳ ನಿರ್ವಹಣೆ ಮತ್ತು ಅನುಸೂಚಿತ ಪ್ರದೇಶದಲ್ಲಿ ಇತರೆ ಕೇಂದ್ರಗಳಿಗಾಗಿ ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂತೆ, ಅಂಥ ದರದಲ್ಲಿ ಶುಲ್ಕ ಮತ್ತು ಇತರೆ ಚಾರ್ಜುಗಳನ್ನು ವಿಧಿಸುವುದು ಪ್ರಾಧಿಕಾರಕ್ಕೆ ಕಾನೂನುಬದ್ಧವಾಗಿರತಕ್ಕದ್ದು.

(2) ಈ ಅಧಿನಿಯಮದ ಅಡಿಯಲ್ಲಿ ಸಂಗ್ರಹಿಸಿದ ಎಲ್ಲಾ ಶುಲ್ಕಗಳು ಮತ್ತು ಇತರೆ ಚಾರ್ಜುಗಳನ್ನು ಪ್ರಾಧಿಕಾರದ ನಿಧಿಗೆ ಜಮಾ ಮಾಡತಕ್ಕದ್ದು.

**15. ಪ್ರಾಧಿಕಾರ ನಿಧಿ.-** (1) ಪ್ರಾಧಿಕಾರವು, `ಪ್ರಾಧಿಕಾರ ನಿಧಿ' ಎಂದು ಕರೆಯಲಾಗುವ ಒಂದು ನಿಧಿಯನ್ನು ಹೊಂದಿರತಕ್ಕದ್ದು, ಇದನ್ನು ಪ್ರಾಧಿಕಾರವು ಪ್ರಾಧೀಕರಿಸಬಹುದಾದಂತೆ ಅಂಥ ಅಧಿಕಾರಿಗಳು ನಿರ್ವಹಿಸತಕ್ಕದ್ದು.

(2) ಪ್ರಾಧಿಕಾರವು, ಈ ಅಧಿನಿಯಮದ ಎಲ್ಲ ಅಥವಾ ಯಾವುವೇ ಉದ್ದೇಶಗಳಿಗಾಗಿ ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಸ್ಥಳೀಯ ಪ್ರಾಧಿಕಾರ, ಯಾವುದೇ ಅಂತರರಾಷ್ಟ್ರೀಯ ಸಂಸ್ಥೆಯಿಂದ ಅಥವಾ ಯಾರೇ ವ್ಯಕ್ತಿ ಅಥವಾ ಸಂಸ್ಥೆಯಿಂದ, ಅದು ನಿಗಮಿತವಾಗಿರಲಿ ಅಥವಾ ಇಲ್ಲದಿರಲಿ, ಅನುದಾನಗಳನ್ನು, ಧನ ಸಹಾಯಗಳನ್ನು, ದೇಣಿಗೆಗಳನ್ನು, ಕಾಣಿಕೆಗಳನ್ನು ಮತ್ತು ದಾನಗಳನ್ನು ಸ್ವೀಕರಿಸಬಹುದು.

(3) ರಾಜ್ಯ ಸರ್ಕಾರವು, ಪ್ರಾಧಿಕಾರವು ಸ್ವಂತ ಸಂಪನ್ಮೂಲಗಳಿಂದ ತನ್ನ ಆಡಳಿತಾತ್ಮಕ ವೆಚ್ಚಗಳನ್ನು ಭರಿಸಲು ಶಕ್ತವಾಗುವವರೆಗೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಪ್ರಾಧಿಕಾರಕ್ಕೆ ಪ್ರತಿವರ್ಷ ನೀಡತಕ್ಕದ್ದು.

(4) ಈ ಅಧಿನಿಯಮದಿಂದಾಗಿ ಪ್ರಾಧಿಕಾರವು ಅಥವಾ ಅದರ ಪರವಾಗಿ ಸ್ವೀಕರಿಸಿದ ಎಲ್ಲಾ ಹಣವನ್ನು ಮತ್ತು ಪ್ರಾಧಿಕಾರಕ್ಕೆ ಪ್ರಾಪ್ತವಾಗುವ ಎಲ್ಲಾ ಬಡ್ಡಿ, ಲಾಭ ಮತ್ತು ಸಾಲವಾಗಿ ಪಡೆದ ಹಣವನ್ನು ನಿಧಿಗೆ ಜಮೆ ಮಾಡತಕ್ಕದ್ದು.

(5) ರಾಜ್ಯ ಸರ್ಕಾರ ಅನ್ಯಥಾ ನಿರ್ದೇಶಿಸಿದ ಹೊರತು, ಹಿಂದಿನ ಉಪಬಂಧಗಳಲ್ಲಿ ನಿರ್ದಿಷ್ಟಪಡಿಸಿದ ಮತ್ತು ನಿಧಿಯ ಭಾಗವಾಗುವ ಎಲ್ಲಾ ಹಣ ಮತ್ತು ಸ್ವೀಕೃತಿಗಳನ್ನು, ಭಾರತದ ರಿಸರ್ವ್ ಬ್ಯಾಂಕ್ ಅಧಿನಿಯಮ, 1934 (1934ರ ಕೇಂದ್ರ ಅಧಿನಿಯಮ 2)ರಲ್ಲಿ ಪರಿಭಾಷಿಸಿದಂತೆ ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಠೇವಣಿ ಇಡತಕ್ಕದ್ದು ಅಥವಾ ರಾಜ್ಯ ಸರ್ಕಾರವು ಅನುಮೋದಿಸಬಹುದಾದಂತೆ ಅಂಥ ಭದ್ರತೆಗಳಲ್ಲಿ ಹೂಡಿಕೆ ಮಾಡಬಹುದು.

(6) ಈ ಅಧಿನಿಯಮದ ಉಪಬಂಧಗಳಿಗೊಳಪಟ್ಟು ಮತ್ತು ಉದ್ದೇಶಗಳಿಗಾಗಿ ನಿಧಿಯನ್ನು ಮತ್ತು ಪ್ರಾಧಿಕಾರದಲ್ಲಿ ನಿಹಿತವಾಗುವ ಎಲ್ಲ ಇತರ ಸ್ವತ್ತುಗಳನ್ನು ಅದು ಧಾರಣ ಮಾಡತಕ್ಕದ್ದು ಮತ್ತು ವಿನಿಯೋಗಿಸತಕ್ಕದ್ದು.

**16. ಆಯವ್ಯಯ.-** ಪ್ರಾಧಿಕಾರವು, ಪ್ರತಿ ವರ್ಷ, ನಿಯಮಿಸಬಹುದಾದಂತೆ ಅಂಥ ನಮೂನೆಯಲ್ಲಿ ಮತ್ತು ಅಂಥ ಸಮಯದಲ್ಲಿ, ಮುಂದಿನ ಆರ್ಥಿಕ ವರ್ಷದ ಸಂಬಂಧದಲ್ಲಿ, ಪ್ರಾಧಿಕಾರದ ಸ್ವೀಕೃತಿಗಳು ಮತ್ತು ಬಟವಾಡೆಗಳನ್ನು ತೋರಿಸುವ ವಾರ್ಷಿಕ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಒಂದು ಪ್ರತಿಯನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

**17. ವಾರ್ಷಿಕ ವರದಿ.-** ಪ್ರಾಧಿಕಾರವು, ಪ್ರತಿಯೊಂದು ವರ್ಷದ ಮುಕ್ತಾಯದ ತರುವಾಯ, ನಿಯಮಿಸಬಹುದಾದಂತೆ ಅಂಥ ನಮೂನೆಯಲ್ಲಿ ಮತ್ತು ಅಂಥ ದಿನಾಂಕಕ್ಕೆ ಮುಂಚೆ, ಅಂಥ ವರ್ಷದಲ್ಲಿಯ ಅದರ ಕಾರ್ಯ ಚಟುವಟಿಕೆಗಳ ಒಂದು ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು, ಅಂಥ ವರದಿಯ ಒಂದು ಪ್ರತಿಯನ್ನು ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ ಮಂಡಿಸುವಂತೆ ಮಾಡತಕ್ಕದ್ದು.

**18. ಪ್ರಾಧಿಕಾರಕ್ಕೆ ಧನ ಸಹಾಯ ಮತ್ತು ಸಾಲಗಳು.-** (1) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ಈ ಅಧಿನಿಯಮದ ಉದ್ದೇಶಗಳಿಗಾಗಿ ರಾಜ್ಯ ಸರ್ಕಾರವು ನಿರ್ಧರಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಪ್ರಾಧಿಕಾರಕ್ಕೆ ಧನ ಸಹಾಯಗಳನ್ನು ನೀಡಬಹುದು.

(2) ರಾಜ್ಯ ಸರ್ಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂತೆ, ರಾಜ್ಯ ಸರ್ಕಾರವು ನಿರ್ಧರಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳ ಮೇಲೆ ಕಾಲಕಾಲಕ್ಕೆ ಪ್ರಾಧಿಕಾರಕ್ಕೆ ಸಾಲಗಳನ್ನು ನೀಡಬಹುದು.

**19. ಪ್ರಾಧಿಕಾರವು ಸಾಲ ಪಡೆಯಲು ಅಧಿಕಾರ.-** ಪ್ರಾಧಿಕಾರವು, ಕಾಲಕಾಲಕ್ಕೆ ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ಅಧಿನಿಯಮದ ಉಪಬಂಧಗಳಿಗೊಳಪಟ್ಟು ಮತ್ತು ಈ ಸಂಬಂಧದಲ್ಲಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು, ಈ ಅಧಿನಿಯಮದ ಉದ್ದೇಶಗಳಿಗಾಗಿ ಅಗತ್ಯವಾದ ಯಾವುದೇ ಮೊತ್ತದ ಸಾಲ ಪಡೆಯಬಹುದು.

**20. ಲೆಕ್ಕ ಪತ್ರಗಳು ಮತ್ತು ಲೆಕ್ಕ ಪರಿಶೋಧನೆ.-** (1) ಪ್ರಾಧಿಕಾರವು, ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ನಿಯಮಗಳಲ್ಲಿ ಅಗತ್ಯಪಡಿಸಲಾದಂತೆ ಸರಿಯಾದ ಲೆಕ್ಕ ಪುಸ್ತಕಗಳನ್ನು ಮತ್ತು

ಇತರ ಪುಸ್ತಕಗಳನ್ನು ನಿರ್ವಹಿಸುವಂತೆ ಮಾಡತಕ್ಕದ್ದು ಮತ್ತು ಅಂಥ ನಿಯಮಗಳಿಗನುಸಾರವಾಗಿ ವಾರ್ಷಿಕ ಲೆಕ್ಕಪತ್ರಗಳ ವಿವರಣ ಪತ್ರವನ್ನು ಸಿದ್ಧಪಡಿಸತಕ್ಕದ್ದು.

(2) ಪ್ರಾಧಿಕಾರವು, ವಾರ್ಷಿಕವಾಗಿ ಅದರ ಲೆಕ್ಕ ಪತ್ರಗಳನ್ನು ರಾಜ್ಯ ಸರ್ಕಾರವು ನಿರ್ದೇಶಿಸಬಹುದಾದಂಥ ವ್ಯಕ್ತಿಗಳಿಂದ ಲೆಕ್ಕ ಪರಿಶೋಧನೆ ಮಾಡಿಸತಕ್ಕದ್ದು.

(3) ಪ್ರಾಧಿಕಾರವು, ಪ್ರಾಧಿಕಾರದ ಲೆಕ್ಕಪತ್ರಗಳ ಲೆಕ್ಕ ಪರಿಶೋಧನೆ ಮಾಡಿಸಿದ ಕೂಡಲೇ ಅದರ ಒಂದು ಪ್ರತಿಯನ್ನು, ಆ ಕುರಿತ ಲೆಕ್ಕಪರಿಶೋಧಕನ ವರದಿಯ ಒಂದು ಪ್ರತಿಯೊಂದಿಗೆ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ನಿಯಮಿಸಲಾದ ರೀತಿಯಲ್ಲಿ ಲೆಕ್ಕಪತ್ರಗಳನ್ನು ಪ್ರಕಟಿಸುವಂತೆ ಮಾಡತಕ್ಕದ್ದು ಮತ್ತು ಅದರ ಪ್ರತಿಗಳನ್ನು ಸೂಕ್ತ ಬೆಲೆಯಲ್ಲಿ ಮಾರಾಟಕ್ಕೆ ಇಡತಕ್ಕದ್ದು.

(4) ಪ್ರಾಧಿಕಾರವು, ರಾಜ್ಯ ಸರ್ಕಾರವು ಲೆಕ್ಕ ಪರಿಶೋಧಕರ ವರದಿಯನ್ನು ಪರಿಶೀಲಿಸಿದ ತರುವಾಯ ಅದು ಸೂಕ್ತವೆಂದು ಭಾವಿಸಿ ನೀಡಿದಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

**21. ಪ್ರಾಧಿಕಾರದಿಂದ ನಿರ್ದೇಶನಗಳು.-** (1) ಪ್ರಾಧಿಕಾರವು, 13ನೇ ಪ್ರಕರಣದ ಅಥವಾ ಯಾವುದೇ ನಗರ ಯೋಜನೆ ಸ್ಕೀಮುಗಳ ಅಡಿಯಲ್ಲಿ ರೂಪಿಸಿದ ಅಭಿವೃದ್ಧಿ ಯೋಜನೆಗಳು ಮತ್ತು ಸ್ಕೀಮುಗಳನ್ನು ಕಾರ್ಯಗತಗೊಳಿಸುವ ಸಲುವಾಗಿ ಯಾವುದೇ ಸ್ಥಳೀಯ ಪ್ರಾಧಿಕಾರಕ್ಕೆ, ಸಂಬಂಧಪಟ್ಟ ನಗರಾಭಿವೃದ್ಧಿ ಪ್ರಾಧಿಕಾರಕ್ಕೆ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಲಿ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮಕ್ಕೆ ಮತ್ತು ಅನುಸೂಚಿತ ಪ್ರದೇಶದಲ್ಲಿಯ ಅಭಿವೃದ್ಧಿ ಚಟುವಟಿಕೆಗಳಿಗೆ ಸಂಬಂಧಪಟ್ಟ ಅಂಥ ಇತರ ಸಂಸ್ಥೆಗಳಿಗೆ ನಿರ್ದೇಶನಗಳನ್ನು ನೀಡಬಹುದು.

(2) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಒಳಗೊಂಡಿದ್ದರೂ, ಅಂಥ ಪ್ರತಿಯೊಂದು ನಿರ್ದೇಶನವನ್ನು ಯಾವ ಸಂಸ್ಥೆಗೆ ನೀಡಲಾಗಿದೆಯೋ ಆ ಸಂಸ್ಥೆಯು ಅದನ್ನು ಪಾಲಿಸತಕ್ಕದ್ದು. ತಪ್ಪಿದಲ್ಲಿ, ಪ್ರಾಧಿಕಾರವು (1)ನೇ ಉಪಪ್ರಕರಣದ ಅಡಿಯಲ್ಲಿ ನೀಡಿದ ನಿರ್ದೇಶನಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಅವಶ್ಯಕ ಕ್ರಮಕೈಗೊಳ್ಳಲು ಮತ್ತು ಅದಕ್ಕಾಗಿ ಯಾವುದೇ ವೆಚ್ಚವನ್ನು ವಹಿಸಿದ್ದರೆ ಅದನ್ನು ಸಂಬಂಧಪಟ್ಟ ಸಂಸ್ಥೆಯಿಂದ ವಸೂಲ್ಮಾಡಲು ಸಕ್ಷಮವಾಗಿರತಕ್ಕದ್ದು.

**22. ಅಧಿನಿಯಮದ ಉಪಬಂಧಗಳ ಉಲ್ಲಂಘನೆಗಾಗಿ ದಂಡನೆ.-** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ಮಾಡಿದ ಯಾವುದೇ ನಿಯಮ, ವಿನಿಯಮ ಅಥವಾ ಉಪವಿಧಿ ಅಥವಾ ಮಂಜೂರು ಮಾಡಿದ ಸ್ಕೀಮಿನ ಉಪಬಂಧಗಳನ್ನು ಉಲ್ಲಂಘಿಸುವ ಯಾರೇ ವ್ಯಕ್ತಿಯು, ಆರು ತಿಂಗಳುಗಳವರೆಗೆ ವಿಸ್ತರಿಸಬಹುದಾದ ಅವಧಿಯ ಕಾರಾವಾಸದಿಂದ ಅಥವಾ ಹತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ಮತ್ತು ಉಲ್ಲಂಘನೆಯು ಮುಂದುವರಿಯುತ್ತಿರುವ ಸಂದರ್ಭದಲ್ಲಿ, ಒಂದು ತಿಂಗಳ ಅವಧಿಯವರೆಗೆ ವಿಸ್ತರಿಸಬಹುದಾದ ಹೆಚ್ಚುವರಿ ಕಾರಾವಾಸದಿಂದ ಅಥವಾ ಮೊದಲ ಅಪರಾಧ ಉಲ್ಲಂಘನೆಯ ತರುವಾಯ ಅಪರಾಧ ಉಲ್ಲಂಘನೆಯು ಮುಂದುವರಿದ ಅವಧಿಯಲ್ಲಿ ಪ್ರತಿದಿನಕ್ಕೆ ಐದುನೂರು ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ಅಥವಾ ಅವೆರಡರಿಂದಲೂ ದಂಡಿತನಾಗತಕ್ಕದ್ದು.

**23. ಕಂಪೆನಿಗಳಿಂದ ಅಪರಾಧಗಳು.-** (1) ಈ ಅಧಿನಿಯಮದ ಮೇರೆಗೆ ಅಪರಾಧವನ್ನು ಮಾಡುವ ವ್ಯಕ್ತಿಯು ಕಂಪೆನಿಯಾಗಿದ್ದರೆ, ಅಪರಾಧವು ನಡೆದ ಕಾಲದಲ್ಲಿ ಕಂಪೆನಿಯ ಆಡಳಿತವನ್ನು ಹೊಂದಿದ್ದ ಮತ್ತು ಅದರ ವ್ಯವಹಾರಗಳನ್ನು ನಡೆಸುವ ಬಗ್ಗೆ ಕಂಪನಿಗೆ ಜವಾಬ್ದಾರನಾಗಿದ್ದ ಪ್ರತಿಯೊಬ್ಬ ವ್ಯಕ್ತಿಯನ್ನು ಹಾಗೂ ಕಂಪೆನಿಯನ್ನು ಸಹ ಆ ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು ಮತ್ತು ಅವರು ತಮ್ಮ ವಿರುದ್ಧದ ವ್ಯವಹರಣೆಗೆ ಹಾಗೂ ಅದಕ್ಕನುಗುಣವಾದ ದಂಡನೆಗೆ ಗುರಿಯಾಗತಕ್ಕದ್ದು:

ಪರಂತು, ಈ ಉಪಕರಣದಲ್ಲಿ ಇರುವುದು ಯಾವುದೂ, ಅಪರಾಧವು ತನ್ನ ತಿಳುವಳಿಕೆಗೆ ಬಾರದೇ ನಡೆಯಿತೆಂದು ಅಥವಾ ಅಂಥ ಅಪರಾಧ ನಡೆಯುವುದನ್ನು ತಡೆಗಟ್ಟಲು ತಾನು ಎಲ್ಲಾ ಯುಕ್ತ ಜಾಗರೂಕತೆಯನ್ನು ವಹಿಸಿದ್ದೇನೆಂದು ಅಂಥ ಯಾರೇ ವ್ಯಕ್ತಿಯು ರುಜುವಾತುಪಡಿಸಿದರೆ, ಆತನನ್ನು ಈ ಅಧಿನಿಯಮದಲ್ಲಿ ಉಪಬಂಧಿಸಲಾದ ಯಾವುದೇ ದಂಡನೆಗೆ ಗುರಿಪಡಿಸತಕ್ಕದಲ್ಲ.

(2) (1) ನೇ ಉಪಪ್ರಕರಣದಲ್ಲಿ ಏನೇ ಒಳಗೊಂಡಿದ್ದರೂ, ಈ ಅಧಿನಿಯಮದ ಮೇರೆಗಿನ ಅಪರಾಧವನ್ನು ಕಂಪೆನಿಯು ಮಾಡಿರುವಲ್ಲಿ ಮತ್ತು ಆ ಅಪರಾಧವು ಕಂಪನಿಯ ಯಾರೇ ನಿರ್ದೇಶಕನ, ವ್ಯವಸ್ಥಾಪಕನ, ಕಾರ್ಯದರ್ಶಿಯ ಅಥವಾ ಇತರ ಅಧಿಕಾರಿಯ ಸಮ್ಮತಿಯಿಂದ ನಡೆಯಿತೆಂದು ಅಥವಾ ಆ ಅಪರಾಧವು ಅವನ ಯಾವುದೇ ನಿರ್ಲಕ್ಷ್ಯತೆಯ ಕಾರಣದಿಂದ ನಡೆಯಿತೆಂದು ಆರೋಪಿಸಿರುವುದು ರುಜುವಾತಾದಲ್ಲಿ, ಅಂಥ ನಿರ್ದೇಶಕನನ್ನು ವ್ಯವಸ್ಥಾಪಕನನ್ನು, ಕಾರ್ಯದರ್ಶಿಯನ್ನು ಅಥವಾ ಇತರ ಅಧಿಕಾರಿಯನ್ನು ಆ ಅಪರಾಧದ ತಪ್ಪಿತಸ್ಥನೆಂದು ಭಾವಿಸತಕ್ಕದ್ದು ಮತ್ತು ಅವರು ತಮ್ಮ ವಿರುದ್ಧದ ವ್ಯವಹರಣೆಗೆ ಗುರಿಯಾಗತಕ್ಕದ್ದು ಹಾಗೂ ತದನುಸಾರವಾಗಿ ಶಿಕ್ಷೆಗೆ ಗುರಿಯಾಗತಕ್ಕದ್ದು.

**ವಿವರಣೆ :-** ಈ ಪ್ರಕರಣದ ಉದ್ದೇಶಗಳಿಗಾಗಿ

(ಎ) ``ಕಂಪನಿ'' ಎಂದರೆ ಒಂದು ನಿಗಮಿತ ನಿಕಾಯ ಮತ್ತು ಇದು ಫರ್ಮನ್ನು ಅಥವಾ ವ್ಯಕ್ತಿಗಳ ಇತರ ಸಂಘವನ್ನು ಒಳಗೊಳ್ಳುತ್ತದೆ; ಮತ್ತು

(ಬಿ) ಫರ್ಮಿನ ಸಂಬಂಧದಲ್ಲಿ ``ನಿರ್ದೇಶಕ'' ಎಂದರೆ ಆ ಫರ್ಮಿನ ಪಾಲುದಾರ.

**24. ಅಭಿಯೋಜನೆಗಾಗಿ ಅನುಮತಿ.-** ಈ ಅಧಿನಿಯಮದ ಅಡಿಯಲ್ಲಿ ದಂಡನೀಯವಾದ ಯಾವುದೇ ಅಪರಾಧಕ್ಕಾಗಿ, ಪ್ರಾಧಿಕಾರದಿಂದ ಅಥವಾ ಈ ಸಂಬಂಧದಲ್ಲಿ ಪ್ರಾಧಿಕಾರವು ಅಧಿಕೃತಗೊಳಿಸಿದ ಯಾರೇ ಅಧಿಕಾರಿಯಿಂದ ಪೂರ್ವಾನುಮತಿ ಪಡೆಯದೆ ಯಾವುದೇ ಅಭಿಯೋಜನೆಯನ್ನು ಹೂಡತಕ್ಕದ್ದಲ್ಲ.

**25. ಪ್ರಾಧಿಕಾರವು ತನ್ನ ಅಥವಾ ಅದರ ವಿರುದ್ಧದ ಕ್ಲೇಮುಗಳನ್ನು ಸಂಧಾನ ಮಾಡಿಕೊಳ್ಳುವುದು.-** ಪ್ರಾಧಿಕಾರವು, ಈ ಅಧಿನಿಯಮದ ಅಡಿಯಲ್ಲಿ ಅದು ಮಾಡಿಕೊಂಡ ಯಾವುದೇ ಕರಾರಿನಿಂದ ಅಥವಾ ಅದು ಹೂಡಿದ ಅಥವಾ ಅದರ ವಿರುದ್ಧ ಹೂಡಲಾದ ಯಾವುದೇ ಕ್ರಮ ಅಥವಾ ದಾವೆಯಿಂದ ಉದ್ಭವಿಸಿದ ಕ್ಲೇಮು ಅಥವಾ ತಗಾದೆಯ ಬಗ್ಗೆ ತಾನು ಪರ್ಯಾಪ್ತವೆಂದು ಭಾವಿಸಬಹುದಾದಂಥ ಮೊತ್ತ ಅಥವಾ ಇತರ ಪರಿಹಾರಕ್ಕಾಗಿ ರಾಜಿಸಂಧಾನ ಮಾಡಿಕೊಳ್ಳಬಹುದು:

ಪರಂತು, ಐವತ್ತು ಸಾವಿರ ರೂಪಾಯಿಗಳನ್ನು ಮೀರುವ ಅಂಥ ಯಾವುದೇ ಕ್ಲೇಮು ಅಥವಾ ತಗಾದೆಯ ಬಗ್ಗೆ ರಾಜ್ಯ ಸರ್ಕಾರದ ಪೂರ್ವಾನುಮೋದನೆ ಪಡೆಯದೆ ರಾಜಿಸಂದಾನ ಮಾಡಿಕೊಳ್ಳತಕ್ಕದ್ದಲ್ಲ.

**26. ವಸೂಲ್ಮಾಡಲಾದ ಜುಲ್ಮಾನೆಗಳನ್ನು ನಿಧಿಗೆ ಜಮೆ ಮಾಡುವುದು.-** ಈ ಅಧಿನಿಯಮದ ಅಡಿಯಲ್ಲಿ ಅಭಿಯೋಜನೆಗಳ ಸಂಬಂಧದಲ್ಲಿ ಸಂಗ್ರಹಿಸಲಾದ ಎಲ್ಲಾ ಜುಲ್ಮಾನೆಗಳನ್ನು ಪ್ರಾಧಿಕಾರ ನಿಧಿಗೆ ಜಮೆ ಮಾಡತಕ್ಕದ್ದು.

**27. ಸದಸ್ಯರು ಮತ್ತು ಅಧಿಕಾರಿಗಳು ಲೋಕ ನೌಕರರಾಗಿರುವುದು.-** ಪ್ರಾಧಿಕಾರದ ಪ್ರತಿಯೊಬ್ಬ ಸದಸ್ಯ, ಪ್ರತಿಯೊಬ್ಬ ಅಧಿಕಾರಿ ಮತ್ತು ಇತರ ನೌಕರನನ್ನು ಭಾರತ ದಂಡ ಸಂಹಿತೆ, 1860ರ 21ನೇ ಪ್ರಕರಣದ ಅರ್ಥವ್ಯಾಪ್ತಿಯಲ್ಲಿ ಲೋಕ ನೌಕರರೆಂದು ಭಾವಿಸತಕ್ಕದ್ದು.

**28. ಸದ್ಭಾವನೆಯಿಂದ ಕೈಗೊಂಡ ಕ್ರಮದ ರಕ್ಷಣೆ.-** ಈ ಅಧಿನಿಯಮದ ಅಥವಾ ಅದರ ಅಡಿಯಲ್ಲಿ ರಚಿಸಿದ ಯಾವುದೇ ನಿಯಮ ಅಥವಾ ವಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ

ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕಾಗಿ ಯಾರೇ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಅಭಿಯೋಜನೆ ಅಥವಾ ಇತರ ಕಾನೂನು ವ್ಯವಹರಣೆಗಳನ್ನು ಹೂಡತಕ್ಕದ್ದಲ್ಲ.

**29. ರಾಜ್ಯ ಸರ್ಕಾರದಿಂದ ನಿಯಂತ್ರಣ, ಇತ್ಯಾದಿ.-** (1) ರಾಜ್ಯ ಸರ್ಕಾರವು, ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಅವಶ್ಯಕ ಅಥವಾ ಯುಕ್ತವೆಂದು ತಾನು ಅಭಿಪ್ರಾಯಪಡುವಂತೆ ಅಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ನೀಡಬಹುದು. ಪ್ರಾಧಿಕಾರವು ಈ ಅಧಿನಿಯಮದ ದಕ್ಷ ನಿರ್ವಹಣೆಗಾಗಿ ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡಬಹುದಾದಂತೆ ಅಂಥ ನಿರ್ದೇಶನಗಳನ್ನು ನೆರವೇರಿಸತಕ್ಕದ್ದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

(2) ರಾಜ್ಯ ಸರ್ಕಾರವು ಸರ್ಕಾರಿ ರಾಜ್ಯಪತ್ರದಲ್ಲಿ ಅಧಿಸೂಚನೆಯ ಮೂಲಕ ಅನುಸೂಚಿಗೆ ಬದಲಾವಣೆಗಳನ್ನು ಮಾಡಬಹುದು.

(3) ಪ್ರಾಧಿಕಾರವು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ಅಗತ್ಯಪಡಿಸಬಹುದಾದಂಥ ವರದಿಗಳನ್ನು ಮತ್ತು ಇತರ ಮಾಹಿತಿಯನ್ನು ಅದಕ್ಕೆ ಒದಗಿಸತಕ್ಕದ್ದು.

(4) ಈ ಅಧಿನಿಯಮದ ಅಡಿಯಲ್ಲಿ ಪ್ರಾಧಿಕಾರವು ತನ್ನ ಅಧಿಕಾರಗಳನ್ನು ಚಲಾಯಿಸುವಲ್ಲಿ ಅಥವಾ ತನ್ನ ಪ್ರಕಾರ್ಯಗಳನ್ನು ನೆರವೇರಿಸುವಲ್ಲಿ ಅಥವಾ ಆ ಸಂಬಂಧದಲ್ಲಿ, ಪ್ರಾಧಿಕಾರ ಮತ್ತು ಒಂದು ಸ್ಥಳೀಯ ಪ್ರಾಧಿಕಾರದ ನಡುವೆ ಯಾವುದೇ ವಿವಾದ ಉದ್ಭವಿಸಿದರೆ, ಅಂಥ ವಿವಾದದ ಕುರಿತ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

**30. ನಿಯಮಗಳ ರಚನಾಧಿಕಾರ.-** (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ ಪೂರ್ವ ಪ್ರಕಟಣೆಯ ಷರತ್ತಿಗೊಳಪಟ್ಟು ಈ ಅಧಿನಿಯಮದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ ರಾಜ್ಯ ವಿಧಾನ ಮಂಡಲದ ಉಭಯ ಸದನಗಳ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಥವಾ ಎರಡು ಅಥವಾ ಹೆಚ್ಚು ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಅದನ್ನು ಹಾಗೆ ಮಂಡಿಸಲಾದ ಅಧಿವೇಶನವು ಅಥವಾ ಅದರ ನಿಕಟೋತ್ತರ ಅಧಿವೇಶನವು ಮುಕ್ತಾಯವಾಗುವ ಮೊದಲು ಆ ನಿಯಮದಲ್ಲಿ ಯಾವುದೇ ಮಾರ್ಪಾಡು ಮಾಡಬೇಕೆಂದು ಉಭಯ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಉಭಯ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಹಾಗೆ ಮಾರ್ಪಾಡಾದ ರೂಪದಲ್ಲಿ ಪರಿಣಾಮಕಾರಿಯಾಗತಕ್ಕದ್ದು ಅಥವಾ ಸಂದರ್ಭಾನುಸಾರ, ಪರಿಣಾಮಕಾರಿಯಾಗತಕ್ಕದ್ದಲ್ಲ. ಆದಾಗ್ಯೂ ಅಂಥ ಮಾರ್ಪಾಡು ಅಥವಾ ರದ್ದಿಯಾತಿಯು, ಆ ನಿಯಮದ ಅಡಿಯಲ್ಲಿ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

**31. ವಿನಿಯಮಗಳ ರಚನಾಧಿಕಾರ.-** ಪ್ರಾಧಿಕಾರವು ಅಧಿನಿಯಮದ ಅಡಿಯಲ್ಲಿ ತನ್ನ ಪ್ರಕಾರ್ಯಗಳನ್ನು ನೆರವೇರಿಸಲು ಸಾಧ್ಯವಾಗುವಂತೆ ಅಧಿಸೂಚನೆ ಮೂಲಕ ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಡನೆ, ಈ ಅಧಿನಿಯಮಕ್ಕೆ ಮತ್ತು ಅದರ ಅಡಿಯಲ್ಲಿ ರಚಿಸಿದ ನಿಯಮಗಳಿಗೆ ಅಸಂಗತವಾಗದಂತೆ ವಿನಿಯಮಗಳನ್ನು ರಚಿಸಬಹುದು. ವಿನಿಯಮಗಳ ಮೂಲಕ ಉಪಬಂಧಿಸಲು ಅಗತ್ಯವಾಗಿರುವ ಅಥವಾ ಉಪಬಂಧಿಸಬಹುದೆಂದು ಪ್ರಾಧಿಕಾರವು ಅಭಿಪ್ರಾಯಪಡುವ ಯಾವುದೇ ವಿಷಯದ ಸಂಬಂಧದಲ್ಲಿ ವಿನಿಯಮಗಳನ್ನು ರಚಿಸಬಹುದು.

**32. ತೊಂದರೆಗಳ ನಿವಾರಣಾ ಅಧಿಕಾರ.-** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು, ಸರ್ಕಾರಿ ರಾಜ್ಯ ಪತ್ರದಲ್ಲಿ ಆದೇಶವನ್ನು ಪ್ರಕಟಿಸುವ ಮೂಲಕ ತೊಂದರೆಯನ್ನು ನಿವಾರಿಸಲು ಸಂದರ್ಭವು ಅಗತ್ಯಪಡಿಸಬಹುದಾದಂತೆ ತನಗೆ ಅವಶ್ಯಕವೆಂದು ಕಂಡುಬರುವ ಯಾವುದೇ ಕಾರ್ಯವನ್ನು ಮಾಡಬಹುದು.

(2) (1)ನೇ ಉಪ ಪ್ರಕರಣದ ಅಡಿಯಲ್ಲಿ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಪ್ರಕಟಿಸಿದ ತರುವಾಯ ಸಾಧ್ಯವಾದಷ್ಟು ಬೇಗನೇ ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸತಕ್ಕದ್ದು ಮತ್ತು ರಾಜ್ಯ ವಿಧಾನ ಮಂಡಲವು ಮಾಡಬಹುದಾದ ಯಾವುದೇ ಮಾರ್ಪಾಡಿಗೊಳಪಟ್ಟು, ಈ ಅಧಿನಿಯಮದಲ್ಲಿ ಅಧಿನಿಯಮಿಸಲಾಗಿದ್ದರೆ ಹೇಗೋ ಹಾಗೆ ಪರಿಣಾಮಕಾರಿಯಾಗಿರತಕ್ಕದ್ದು.

ಪರಂತು, ಈ ಅಧಿನಿಯಮದ ಅಧಿನಿಯಮಿತಿಗಾಗಿ ಗೊತ್ತುಪಡಿಸಿದ ದಿನಾಂಕದಿಂದ ಎರಡು ವರ್ಷಗಳ ಮುಕ್ತಾಯದ ತರುವಾಯ ಈ ಪ್ರಕರಣದ ಮೇರೆಗೆ ಯಾವುದೇ ಅಂಥ ಮಾರ್ಪಾಟನ್ನು ಮಾಡತಕ್ಕದ್ದಲ್ಲ.

## ಅನುಸೂಚಿ
## ಅಭಿವೃದ್ಧಿಗಾಗಿ ನಿರ್ದಿಷ್ಟಪಡಿಸಿದ ಪ್ರದೇಶ

| ಕ್ರ.ಸಂ. | ಗದಗ (ಸರ್ವೆ ಸಂಖ್ಯೆಗಳು) | ಪ್ರದೇಶ (ಚದುರ ಯಾರ್ಡ್‌ಗಳಲ್ಲಿ) |
|---|---|---|
| 1 | 3796/2 | 2222-02 |
| 2 | 3796/3 | 2222-02 |
| 3 | 3796/4 | 2222-02 |
| 4 | 3796/5 | 2222-02 |
| 5 | 3796/6 | 2222-02 |
| 6 | 3796/7 | 1666-06 |
| | | 555-05 |
| 7 | 3796/8 | 2222-02 |
| 8 | 3796/9 | 2222-02 |
| 9 | 3796/10 | 2222-02 |
| 10 | 3796/11 | 2222-02 |
| 11 | 3796/12 | 2222-02 |
| 12 | 3797/1 | 1908-00 |
| 13 | 3796/14 | 1111-01 |
| 14 | 3796/15 | 2222-02 |
| 15 | 3796/16 | 2222-02 |

| | | |
|---|---|---|
| 16 | 3796/17 | 2750-00 |
| 17 | 3796/18 | 1837-04 |
| 18 | 3796/19 | 1512-04 |
| 19 | 3796/20 | 1210 |
| 20 | 3796/21ಬಿ | 2200-00 |
| 21 | 3782-2 | 1008-03 |
| | | 1213-03 |
| 22 | 3783/3 | 2222-02 |
| 23 | 3783/4 | 2222-02 |
| 24 | 3783/5 | 2222-02 |
| 25 | 3783/6 | 1191-06 |
| 26, 27 | 3782/2ಎ+2ಬಿ | 2962-05 |
| 28 | 3782/3 | 222-02 |
| 29 | 3782/4 | 1111-01 |
| 30 | 3782/5 | 2222-02 |
| 31 | 3782/6 | 1111-01 |
| | | 1111-04 |
| 32 | 3782/7 | 1111-01 |
| 33 | 3782/8A+8B+8C | 2158-02 (Half) |
| | | 32-00 |
| | | 2158-02 (Half) |
| 34 | 3782/9 | 2222-02 |
| 35 | 3782/10 | 2222-02 |
| 36 | 3782/11B | 1111-01 |
| 37 | 3782/11A | 1111-01 |
| 38 | 3782/13 | 2222-02 |
| 39 | 3782/14A | 1111-01 |
| 40 | 3782/14B | 1111-01 |
| 41 | 3782/15A | 1111-01 |
| 42 | 3782/15B | 1111-01 |
| 43 | 3797/2 | 1700-00 |
| 44 | 3797/3 | 1700-00 |

| | | |
|---|---|---|
| 45 | 3797/4 | 1700-00 |
| 46 | 3797/5 | 1620-00 |
| 47 | 3797/6 | 1662-05 |
| 48 | 3797/7 | 1908-00 |
| 49 | 3797/8 | 1932-05 |
| 50 | 3797/9A | 940-00 |
| 51 | 3797/9B | 927-05 |
| 52 | 3797/10 | 1975-00 |
| 53 | 3797/11 | 2100-00 |
| 54 | 3797/12 | 1987-05 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.

ಸಂಖ್ಯೆ: ನಅಇ 18 ಟಿಎಂಡಿ 2023 (2)

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಡಾ|| ಬಿ.ಆರ್.ಅಂಬೇಡ್ಕರ್ ವೀಧಿ ,
ಬೆಂಗಳೂರ, ದಿನಾಂಕ: 23.05.2025

**<u>ಅಧಿಸೂಚನೆ</u>**

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತು ಪ್ರದರ್ಶನ ಪ್ರಾಧಿಕಾರ ಅಧ್ಯಾದೇಶ 2025 (2025 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ:03) ರ 1ನೇ ಪ್ರಕರಣದ (2) ನೇ ಉಪ ಪ್ರಕರಣದಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಮೂಲಕ ಸದರಿ ಅಧ್ಯಾದೇಶ ಉಪಬಂಧಗಳು ದಿನಾಂಕ:23-05-2025 ರಿಂದ ಜಾರಿಗೆ ಬರತಕ್ಕದ್ದೆಂದು ಗೊತ್ತುಪಡಿಸಿದೆ.

ಸ್ಥಳ: ಬೆಂಗಳೂರು.
ದಿನಾಂಕ:23-05-2025

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಮಹಂತಪ್ಪ ಎಸ್. ತುರಕನೂರ)**
ಸರ್ಕಾರ ಅಧೀನ ಕಾರ್ಯದರ್ಶಿ,
ಎಂ.ಎ-2 ಮತ್ತು ಮಂಡಳಿ ಶಾಖೆ,
ನಗರಾಭಿವೃದ್ಧಿ ಇಲಾಖೆ.

## 2025 ರ ಕರ್ನಾಟಕ ಅಧಿನಿಯಮ ಸಂಖ್ಯೆ: 66

(2025ರ ಸೆಪ್ಟೆಂಬರ್ ತಿಂಗಳ 12ನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025

(2025ರ ಸೆಪ್ಟೆಂಬರ್ ತಿಂಗಳ 11ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 38)ನ್ನು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ (ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು 2025ರ ಮೇ, 23ನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪ್ರಕರಣ 3ರ ತಿದ್ದುಪಡಿ.-** ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧಿನಿಯಮ, 2024 (2025ರ ಕರ್ನಾಟಕ ಅಧಿನಿಯಮ ಸಂ. 38)ರ 3ನೇ ಪ್ರಕರಣದ (3)ನೇ ಉಪ-ಪ್ರಕರಣದಲ್ಲಿರುವ (ಸಿ) ಖಂಡದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ:-

"

| | | |
|---|---|---|
| (ಸಿ-i) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಸಂಸತ್ ಸದಸ್ಯರು | ಪದನಿಮಿತ್ತ ಸದಸ್ಯರು |
| (ಸಿ-ii) | ಪ್ರಾಧಿಕಾರದ ಅಧಿಕಾರ ವ್ಯಾಪ್ತಿಯೊಳಗೆ ಬರುವ ಪ್ರಾದೇಶಿಕ ಮತಕ್ಷೇತ್ರದ ಕರ್ನಾಟಕ ರಾಜ್ಯ ವಿಧಾನ ಪರಿಷತ್ ಸದಸ್ಯರುಗಳ ಪೈಕಿ | ಪದನಿಮಿತ್ತ ಸದಸ್ಯರು |

| | | |
|---|---|---|
| | ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರು ನಾಮನಿರ್ದೇಶಿಸಿದ ಒಬ್ಬ ಸದ್ಯಸ್ಯರು | |
| (ಸಿ-iii) | ಅಧ್ಯಕ್ಷರು, ನಗರ ಸಭೆ, ಗದಗ - ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-iv) | ವಿರೋಧ ಪಕ್ಷದ ನಾಯಕರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-v) | ಉಪಾಧ್ಯಕ್ಷರು, ನಗರ ಸಭೆ, ಗದಗ-ಬೆಟಗೇರಿ | ಪದನಿಮಿತ್ತ ಸದಸ್ಯರು |
| (ಸಿ-vi) | ಗದಗ-ಬೆಟಗೇರಿ ನಗರ ಸಭೆಯ ಎಲ್ಲಾ ಸ್ಥಾಯಿ ಸಮಿತಿಗಳ ಅಧ್ಯಕ್ಷರು, | ಪದನಿಮಿತ್ತ ಸದಸ್ಯರು |

"

**3. ನಿರಸನ ಮತ್ತು ಉಳಿಸುವಿಕೆಗಳು.-** (1) ಗದಗ-ಬೆಟಗೇರಿ ವ್ಯಾಪಾರ, ಸಂಸ್ಕೃತಿ ಮತ್ತು ವಸ್ತುಪ್ರದರ್ಶನ ಪ್ರಾಧಿಕಾರ ಅಧ್ಯಾದೇಶ, 2025 (2025ರ ಕರ್ನಾಟಕ ಅಧ್ಯಾದೇಶ ಸಂ. 03)ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಅಂಥ ನಿರಸನವು ಏನೇ ಒಳಗೊಂಡಿದ್ದರೂ ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿಯಾದಂತೆ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ತೆಗೆದುಕೊಂಡ ಯಾವುದೇ ಕ್ರಮವನ್ನು, ಈ ಅಧಿನಿಯಮದ ಅಡಿಯಲ್ಲಿ ತಿದ್ದುಪಡಿಯಾದಂತೆ ಅದನ್ನು ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**ಜಿ. ಶ್ರೀಧರ್**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಇಲಾಖೆ.